ದಿಃ 23.07.2026

**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಹೊಳಲ್ಕೆರೆ.**

**ಸಿ.ಸಿ. 591/2021**

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಚಿದಾನಂದ | ಪ್ರಾ.ಸಾ.7 |
| ತಂದೆಯ/ಗಂಡನ ಹೆಸರು | : | ಮಲ್ಲಿಕಾರ್ಜುನಪ್ಪ | ಚಾ.ಸಾ.7 |
| ವಯಸ್ಸು | : | 47 ವರ್ಷ | |
| ಕೆಲಸ | : | ಮುಖ್ಯ ಪೇದೆ, ಚಿಕ್ಕಜಾಜೂರು ಪೊಲೀಸ್ ಠಾಣೆ , | ಸಾ ಪ್ರ ಬೋ |
| ವಾಸ | : | ಚಿಕ್ಕಜಾಜೂರು | ದಿಃ23.07.2026 |

**ಮುಖ್ಯ ವಿಚಾರಣೆ ಎ.ಪಿ.ಪಿ.ಯವರಿಂದಃ**

ನಾನು 2016 ರಿಂದ 2022 ರವರೆಗೆ ಹೊಳಲ್ಕೆರೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 31.12.2019 ರಂದು ಬೆಳಗ್ಗೆ 9.30 ಗಂಟೆ ಸಮಯದಲ್ಲಿ ನಾನು ಠಾಣಾ ಕರ್ತವ್ಯವದಲ್ಲಿದ್ದಾಗ, ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಯಿಂದ ಬಂದ ಮೆಮೋವನ್ನು ಸ್ವೀಕರಿಸಿಕೊಂಡು, ಆಸ್ಪತ್ರೆಗೆ ಭೇಟಿ ನೀಡಿ ಚಾಸಾ.1 ರವರ ಹೇಳಿಕೆಯನ್ನು ಪಡೆದುಕೊಂಡು ಠಾಣೆಗೆ ಬಂದು ಚಾಸಾ.8 ರವರಿಗೆ ಬೆಳಗ್ಗೆ 11.30 ಕ್ಕೆ ನೀಡಿರುತ್ತೇನೆ. ಸಾಕ್ಷಿ ಆಸ್ಪತ್ರೆಯಿಂದ ಬಂದ ಮೆಮೊವನ್ನು ನೋಡಿ ಗುರುತಿಸಿದ್ದು, ನಿಪಿ.6 ಎಂದು, ಸಾಕ್ಷಿಯ ಸಹಿಯನ್ನು ನಿಪಿ.6(ಎ) ಎಂದು ಗುರುತಿಸಲಾಯಿತು. ಸಾಕ್ಷಿ ನಿಪಿ.1 ರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ನಿಪಿ.1(ಬಿ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಆರೋಪಿ ಪರ ಶ್ರೀ ಎಂ.ಎನ್.ಸಿ. ವಕೀಲರಿಂದ**

3. ನಾನು ಬೆಳಗ್ಗೆ 9.30 ಕ್ಕೆ ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಯಿಂದ ಮೆಮೊ ಸ್ವೀಕರಿಸಿರುತ್ತೇನೆ. ಠಾಣಾಧಿಕಾರಿಗಳ ಸೂಚನೆಯ ಮೇರೆಗೆ ನಾನು ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಗೆ ಹೋಗಿ ಚಾಸಾ.1 ರವರ ಹೇಳಿಕೆಯನ್ನು ಪಡೆದುಕೊಂಡು ಬಂದಿರುತ್ತೇನೆ. ನಾನು ಬೆಳಗ್ಗೆ 8.30 ಕ್ಕೆ ಹೊಳಲ್ಕೆರೆಯನ್ನು ಬಿಟ್ಟಿರುತ್ತೇನೆ. ಹೊಳಲ್ಕೆರೆಯಿಂದ ಚಿತ್ರದುರ್ಗಕ್ಕೆ ಹೋಗಲು ಒಂದು ಗಂಟೆ ಬೇಕಾಗುತ್ತದೆ. ನಾನು ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಗೆ ಖಾಸಗಿ ಬಸ್ಸಿನಲ್ಲಿ ಹೋಗಿರುತ್ತೇನೆ. ನಾನು ಚಿತ್ರದುರ್ಗದ ಜಿಲ್ಲಾ ಆಸ್ಪತ್ರೆಗೆ ಹೋಗಿಲ್ಲ, ಬದಲಾಗಿ ಠಾಣೆಯಲ್ಲಿಯೇ ನಿಪಿ.1 ನ್ನು ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿನ ಎಲ್ಲಾ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

ದಿ: 23.07.2026

**ಮರುವಿಚಾರಣೆ : ಇಲ್ಲ.**

(ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ. ಹೇ. ಕೇ. ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.